## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.

## ಸಿ.ಸಿ.ನಂ.444/2018

| | | | |
|---|---|---|---|
| ಸಾಕ್ಷಿದಾರರ ಹೆಸರು | ಜಯಕುಮಾರ ಉಳಾಗಡ್ಡಿ | ಸಿಡಬ್ಲ್ಯೂ | 6 |
| ತಂದೆ ಹೆಸರು | ಮುರಿಗೆಪ್ಪ | ಪಿಡಬ್ಲ್ಯೂ | 7 |
| ವಯಸ್ಸು | 52 ವರ್ಷ | | |
| ಉದ್ಯೋಗ | ವ್ಯಾಪಾರ | | |
| ವಾಸಸ್ಥಳ | ಹಾವೇರಿ | | |

**ದಿಃ 11.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1). ಚಾ.ಸಾ-2 ಮತ್ತು ಆರೋಪಿಗಳ ಪರಿಚಯ ಇರುವದಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ದಾಖಲಾತಿಗಳ ಬಗ್ಗೆ ಮಾಹಿತಿ ಇರುವದಿಲ್ಲ. ಅದೇ ರೀತಿ ನಾನು ಯಾವುದೇ ದಾಖಲಾತಿಗಳಿಗೆ ಸಹಿ ಮಾಡಿರುವದಿಲ್ಲ ಮತ್ತು ಪೊಲೀಸರು ನನ್ನ ಸಮಕ್ಷಮ ಸ್ವತ್ತುಗಳನ್ನು ವಶಪಡಿಸಿಕೊಂಡಿರುವದಿಲ್ಲ. ನ್ಯಾಯಾಲಯದ ಮುಂದೆ ಜಪ್ತು ಪಂಚನಾಮೆಯ ಮೂಲ ಪ್ರತಿ ಇಲ್ಲದೇ ಇರುವ ಕಾರಣ, ಅದರ ನಕಲು ಪ್ರತಿಯನ್ನು ಹಾಜರುಪಡಿಸಿದ್ದು, ನಕಲು ಪ್ರತಿಯನ್ನು ಗುರುತಿಸಲು ಆಗುವದಿಲ್ಲ ಎಂದು ಅದನ್ನು ನಿಶಾನೆಗೊಳಿಸಿರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ದಿನಾಂಕಃ 12.12.2016 ರಂದು 3 ನೇ ಆರೋಪಿಯು ಕೃತ್ಯಕ್ಕೆ ಬಳಸಿದ ಒಂದು ಕಂಪ್ಯೂಟರ ಮಾನೀಟರ್, ಸಿ.ಪಿ.ಯು, ಒಂದು ಮೌಸ್, ಒಂದು

ಸಿ.ಡಬ್ಲೂ-6, ಪಿ.ಡಬ್ಲೂ-7

ಕೀಬೋರ್ಡ್, ಬಯೋಮೆಟ್ರಿಕ ಮಷಿನ ಆರೋಪಿಗಳು ಬಳಸಿಕೊಂಡು ನಕಲಿ ಕೂಪನಗಳನ್ನು ತಯಾರಿಸಿ ಜನಕ್ಕೆ ಸರ್ಕಾರದಿಂದ ಸಿಗುವ ಪಡಿತರವನ್ನು ಪೂರೈಸಿ, ಸರ್ಕಾರಕ್ಕೆ ಮೋಸ ಮಾಡಿ ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ರೂ.51,738/-ಗಳನ್ನು ನಷ್ಟವನ್ನುಂಟು ಮಾಡಿರುತ್ತಾರೆ ಅಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಕುರಿತಾಗಿ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಅದೇ ರೀತಿ ನ್ಯಾಯಾಲಯದ ಮುಂದೆ ಇರುವ ಮುದ್ದೇಮಾಲುಗಳನ್ನು ತೋರಿಸಲಾಗಿ ಸದರಿ ಮುದ್ದೇಮಾಲುಗಳ ಕುರಿತಾಗಿ ನನಗೆ ಯಾವುದೇ ಮಾಹಿತಿ ಇರುವದಿಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿಃ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.</u>**

**<u>ಮರು ವಿಚಾರಣೆ ಇಲ್ಲಾ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.